**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲಿರುವ ಸೂಚನೆಗೆ ಉತ್ತರಿಸುವ ಕುರಿತು.**

******

**ಪ್ರಸ್ತಾಪ:**

"ನಿಯಂತ್ರಣಕ್ಕೆ ಬಾರದ ಮರಳು ಅಕ್ರಮ ದಂಧೆ, ಕಣ್ಮುಚ್ಚಿ ಕುಳಿತ ಅಧಿಕಾರಿಗಳು, ಕ್ಯಾರೇ ಎನ್ನದ ದಂಧೆಕೋರರು! ಅಕ್ರಮಕ್ಕೆ ಕುಸಿದು ಬೀಳುವ ಸ್ಥಿತಿಯಲ್ಲಿವೆ ಜಿಲ್ಲೆಯ ಹಲವು ಸೇತುವೆಗಳು" ಎಂಬ ಶೀರ್ಷಿಕೆಯಡಿ ದಿನಾಂಕ 05.03.2025ರ ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ವರದಿಯಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಿಲ್ಲಾಡಳಿತ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಪೊಲೀಸ್, ಕಂದಾಯ, ಆರ್‌ಟಿಒ, ಪಿಡಬ್ಲ್ಯುಡಿ. ಸಹಿತ ಹಲವು ವ್ಯವಸ್ಥೆಗಳಿದ್ದರೂ ಅಕ್ರಮ ಮರಳುಗಾರಿಕೆ ನಿಯಂತ್ರಿಸುವಲ್ಲಿ ಎಲ್ಲರೂ ವಿಫಲರಾಗಿದ್ದಾರೆ.

2024 ಏಪ್ರಿಲ್‌ನಿಂದ ಡಿಸೆಂಬರ್ ತನಕ ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಕಂದಾಯ, ಪೊಲೀಸ್, ಅರಣ್ಯ ಮತ್ತು ಲೋಕೋಪಯೋಗಿ ಇಲಾಖೆ ಮೂಲಕ 155 ಪ್ರಕರಣ ದಾಖಲಿಸಿದ್ದು, ₹49.60 ಲಕ್ಷ ದಂಡ ವಿಧಿಸಿ, 73 ಎಫ್.ಐ.ಆರ್ ದಾಖಲಿಸಿದ್ದರೂ, ಅಕ್ರಮ ಎಗ್ಗಿಲ್ಲದೆ ನಡೆಯುತ್ತಿದೆ. ಇದರಿಂದಾಗಿ ಜಿಲ್ಲೆಯ ಹಲವು ಸೇತುವೆಗಳು ಕುಸಿದು ಬೀಳುವ ಸ್ಥಿತಿಗೆ ತಲುಪಿರುವುದು ವಿಪರ್ಯಾಸವಾಗಿದೆ.

ಜನಪ್ರತಿನಿಧಿಗಳು, ಅಧಿಕಾರಿಗಳ ಕಣ್ಮುಂದೆಯೇ ರಾಜಾರೋಷವಾಗಿ ಅಕ್ರಮ ಮರಳುಗಾರಿಕೆ ನಡೆಯುತ್ತಿದ್ದರೂ ಕ್ರಮ ಕೈಗೊಳ್ಳಬೇಕಾದವರು ಕೈಕಟ್ಟಿ ಕುಳಿತಿದ್ದಾರೆ. ಪರಸ್ಪರ ಸಹಕರಿಸಿ ದಾಳಿ ಮಾಡಬೇಕಾದ ಅಧಿಕಾರಿಗಳೇ ಉಸ್ತುವಾರಿ ಸಚಿವರ ಕೆಡಿಪಿ ಸಭೆಯಲ್ಲಿ ಆರೋಪ ಪ್ರತ್ಯಾರೋಪ ಮಾಡಿದ್ದರು.

ನಾನ್ ಸಿಆರ್‌ಝಡ್ ವ್ಯಾಪ್ತಿಯ 18 ಕಡೆ ಮರಳು ದಿಬ್ಬ ತೆರವಿಗೆ ಅವಕಾಶ ನೀಡಲಾಗಿದೆ. ಸಿಆರ್ ಝಡ್ ವ್ಯಾಪ್ತಿಯ ಮಂಗಳೂರು ಮತ್ತು ಉಳ್ಳಾಲ ತಾಲ್ಲೂಕಿನಲ್ಲಿ 2019ರಲ್ಲಿ ಮರಳುಗಾರಿಕೆ ನಿಷೇಧಿಸಲಾಗಿದೆ. ಪರ್ಮಂಕಿಯಲ್ಲಿ ಕಿರು ನೀರಾವರಿ ಇಲಾಖೆಗೆ, ಅಡ್ಯಾರಿನಲ್ಲಿ ಝಕರಿಯಾ ಕೋಡಿಬೆಟ್ಟು, ಮೊಗರು ಎಂಬಲ್ಲಿ ಪ್ರವೀಣ್ ಆಳ್ವ ಮತ್ತು ರಾಜೇಂದ್ರ ಮೆಂಡನ್ ಎಂಬುವವರಿಗೆ ಮರಳುಗಾರಿಕೆಗೆ ಅನುಮತಿ ಇದೆ. ಉಳಿದೆಡೆ ಅಕ್ರಮವಾಗಿ ನಡೆಯುತ್ತಿದ್ದು, ಅತ್ತ ಅಧಿಕಾರಿಗಳು ಸುಳಿಯುವುದೇ ಇಲ್ಲ. ಪ್ರಸ್ತುತ ಯಂತ್ರಗಳ ಬಳಕೆ, ದ್ವೀಪ, ಸೇತುವೆಗಳಿಗೆ ಹಾನಿ ಬಗ್ಗೆ ಸಾರ್ವಜನಿಕರಿಂದ ದೂರು ಬಂದರೆ ಮಾತ್ರ ಕೆಲವೊಮ್ಮೆ ದಾಳಿ ನಡೆಯುತ್ತದೆ.

ಜಿಲ್ಲಾ ಟಾಸ್ಕ್‌ಫೋರ್ಸ್‌ನಲ್ಲಿ ಕಂದಾಯ, ಪೊಲೀಸ್, ಆರ್‌ಟಿಒ, ಪಿಡಬ್ಲ್ಯುಡಿ ಸಹಿತ 12 ಇಲಾಖೆಗಳಿಗೆ ದಾಳಿ ಮಾಡುವ ಅನುಮತಿ ಇದ್ದರೂ, ಗಣಿ ಇಲಾಖೆಯನ್ನು ಮಾತ್ರ ಬೊಟ್ಟು ಮಾಡಲಾಗುತ್ತಿದೆ.

ಜಿಲ್ಲೆಯಲ್ಲಿ ಅಕ್ರಮದ ವಿರುದ್ಧ ದಾಳಿ ಮಾಡಲು ಗಣಿ ಇಲಾಖೆ ಬಳಿ ನಾಲ್ಕು ಮಂದಿ ತಾಂತ್ರಿಕ ಅಧಿಕಾರಿ ಮತ್ತು ಎರಡೇ ವಾಹನಗಳಿವೆ. ಆದ್ದರಿಂದ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಸಹಯೋಗ ಪಡೆದು ಅಕ್ರಮವನ್ನು ಮಟ್ಟ ಹಾಕಲು ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಮಾನ್ಯ ಗಣಿ ಮತ್ತು ಭೂವಿಜ್ಞಾನ ಮಂತ್ರಿಗಳನ್ನು ಶೂನ್ಯ ವೇಳೆಯಲ್ಲಿ ಒತ್ತಾಯಿಸುತ್ತೇನೆ.

**ಉತ್ತರ:**

- ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 2021 ನ್ನು ಜಾರಿಗೆ ತರಲಾಗಿರುತ್ತದೆ. ಸದರಿ ನಿಯಮ 31-R(1) ಮತ್ತು (2) ರಲ್ಲಿ, ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.

- ಸದರಿ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.
- ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ (ತಿದ್ದುಪಡಿ) ರಿಯಾಯಿತಿ ನಿಯಮಗಳು, 1994ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.
- ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯ ಸದಸ್ಯ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡಗಳನ್ನು ರಚಿಸಿಕೊಂಡು ಪ್ರತಿ ದಿನ ಗಸ್ತು ಕಾರ್ಯಾಚರಣೆ ನಡೆಸಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.
- ಅದರಂತೆ, ದಕ್ಷಿಣ ಕನ್ನಡ ಜಿಲ್ಲಾ ಮರಳು ಸಮಿತಿಯ ವಿವಿಧ ಇಲಾಖೆಗಳಿಂದ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 03 ವರ್ಷಗಳಲ್ಲಿ ಅನಧಿಕೃತ ಮರಳುಗಾರಿಕೆ / ಸಾಗಾಣಿಕೆ/ ದಾಸ್ತಾನು ಚಟುವಟಿಕೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ:

| ವರ್ಷ | ಪತ್ತೆ ಹಚ್ಚಿದ ಪ್ರಕರಣಗಳು | ಸಂಗ್ರಹವಾದ ದಂಡ (₹ಲಕ್ಷಗಳಲ್ಲಿ) | ದಾಖಲಾದ ಎಫ್.ಆರ್.ಆರ್/ ಪಿ.ಸಿ.ಆರ್. |
|---|---|---|---|
| 2022-23 | 269 | 145.62 | 8 |
| 2023-24 | 296 | 179.69 | 33 |
| 2024-25 (ಜನವರಿ ಅಂತ್ಯಕ್ಕೆ) | 173 | 54.04 | 82 |
| ಒಟ್ಟು | 738 | 379.35 | 123 |

- ಕಳೆದ 06 ತಿಂಗಳಲ್ಲಿ ದಕ್ಷಿಣ ಕನ್ನಡ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಮರಳು ಗಣಿಗಾರಿಕೆಗೆ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದ್ದು, ಮರಳು ಗಣಿಗಾರಿಕೆಗೆ ಬಳಸುತಿದ್ದ ಒಟ್ಟು 58 ದೋಣಿಗಳು, 09 ಮೋಟರ್ ಯಂತ್ರಗಳು, 01 ಟಿಪ್ಪರ್ ವಾಹನ ಮತ್ತು 13 ಗ್ಯಾಸ್ ಸಿಲಿಂಡರ್‌ಗಳನ್ನು ವಶಕ್ಕೆ ಪಡೆದು ಸಂಬಂಧಪಟ್ಟ ಪೊಲೀಸ್ ಠಾಣೆ / ನ್ಯಾಯಾಲಯಗಳಲ್ಲಿ 08 ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ.
- ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಚಟುವಟಿಕೆಗಳ ವಿರುದ್ಧ ಜಿಲ್ಲಾ ಮರಳು ಸಮಿತಿ / ತಾಲ್ಲೂಕು ಸಮಿತಿಯ ಸದಸ್ಯ ಇಲಾಖೆಗಳಿಂದ ಮೇಲ್ಕಂಡಂತೆ ಕ್ರಮ ವಹಿಸಲಾಗಿರುತ್ತದೆ.

ಸಂಖ್ಯೆ ಸಿಐ-ಎಂಎಂಎನ್/78/2025

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆಸಚಿವರು.